**<u>ಪ್ರಧಾನ ಸಿವಿಲ್ ಮತ್ತು  ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಗಳವರ ನ್ಯಾಯಾಲಯ ಚಿಂಚೋಳಿ</u>**

**ಸಿಸಿ  ನಂ. 1672/2022**

| | | | |
|---|---|---|---|
| **ಹೆಸರು** | : | **ಕಾಶಿನಾಥ** | ಚಾ.ಸಾ. 7 |
| **ತಂದೆಯ  ಹೆಸರು** | : | **ರೇವಣಸಿದ್ದಪ್ಪ** | ಪ್ರಾ.ಸಾ. 2 |
| **ವಯಸ್ಸು** | : | **53 ವರ್ಷ** | ದಿನಾಂಕಃ 10-10-2025 |
| **ಉದ್ಯೋಗ** | : | **ವ್ಯವಸಾಯ** | |
| **ವಾಸಸ್ಥಳ** | : | **ಅಣವಾರ** | |

**ಸಾಕ್ಷಿಗೆ ಪ್ರಮಾಣ ವಚನ ಬೋಧಿಸಲಾಯಿತು.**

**<u>ಮುಖ್ಯ ವಿಚಾರಣೆಃ ಸಹಾಯಕ ಸರಕಾರಿ ಅಭಿಯೋಜಕರಿಂದಃ</u>**

ಚಾಸಾ-6 ಮತ್ತು 19 ರವರು ನನಗೆ ಗೊತ್ತು.

ಈಗ ನೋಡುತ್ತಿರುವ ನಿಪಿ-1ರ ದಾಖಲೆಯಲ್ಲಿ ನನ್ನ ಸಹಿ ಇದೆ. ಅದರಲ್ಲಿರುವ ನನ್ನ ಸಹಿಯನ್ನು ನಿಪಿ-1(ಬಿ) ಎಂದು ಗುರುತಿಸಲಾಯಿತು.

ಈಗ ನೋಡುತ್ತಿರುವ ನಿಪಿ-2 ಮತ್ತು 3ರ ಭಾವಚಿತ್ರಗಳಲ್ಲಿ ನಾನು ಇದ್ದೇನೆ.

ಈಗ 2 ವರ್ಷಗಳ ಹಿಂದೆ ಚಿಂಚೋಳಿ ಪೋಲಿಸ ಠಾಣೆಯಲ್ಲಿ ಮಧ್ಯಾಹ್ನ ಸಮಯಕ್ಕೆ ಒಂದು ಲಾರಿ ಹಾಗೂ ಒಂದು ದ್ವಿಚಕ್ರ ವಾಹನದ ಮುಂದೆ ನಿಲ್ಲಿಸಿ ಭಾವಚಿತ್ರವನ್ನು ಪಡೆದಿರುತ್ತಾರೆ. ಸದರಿ ವಾಹನಗಳ ಪಂಚನಾಮೆಗೆ ಸಹಿ ಮಾಡು ಎಂದು ಹೇಳಿದಕ್ಕೆ ಸಹಿ ಮಾಡಿದ್ದೇನೆ. ಯಾವ ಕಾರಣಕ್ಕಾಗಿ ಸದರಿ ವಾಹನಗಳನ್ನು ಪೋಲಿಸ ಠಾಣೆಗೆ ಕರೆತಲಾಗಿತ್ತು ಎಂದು ನನಗೆ ಗೊತ್ತಿಲ್ಲ.

(ಈ ಹಂತದಲ್ಲಿ ತನಿಖಾಧಿಕಾರಿಯವರ ಮುಂದೆ ಸಲ್ಲಿಸಿರುವ ಜಪ್ತಿ ಪಂಚನಾಮೆಗೆ ಈ ಸಾಕ್ಷಿ ಭಾಗಶಃ ಪ್ರತಿಕೂಲ ಸಾಕ್ಷ್ಯ ನುಡಿಯುತ್ತಿದ್ದು, ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಪಾಟೀ ಸವಾಲಿಗೆ ಅನುಮತಿ ಕೊಡುವಂತೆ ಸ.ಸ.ಅ.ರವರು ಅನುಮತಿ ಕೋರುತ್ತಾರೆ. ಸಾಕ್ಷಿಯ ಹೇಳಿಕೆಯನ್ನು ಪರಿಶೀಲಿಸಿ ಅನುಮತಿ ನೀಡಲಾಯಿತು.)

**<u>ಪಾಟೀ ಸವಾಲುಃ ಸಹಾಯಕ ಸರಕಾರಿ ಅಭಿಯೋಜಕರಿಂದಃ</u>**

ದಿನಾಂಕ 27-05-2022 ರಂದು ಪೋಲಿಸರು ಸದರಿ ವಾಹನಗಳನ್ನು ಜಪ್ತಿ ಮಾಡಿದ ಕಾರಣ ಜಪ್ತಿ ಪಂಚನಾಮೆಯಲ್ಲಿ ನನ್ನ ಸಹಿ ಪಡೆದಿರುತ್ತಾರೆ ಎಂದರೆ ನನಗೆ ಗೊತ್ತಿಲ್ಲ. ನಿಪಿ-1 ರ ಸಂಗತಿಗಳನ್ನು ಪೋಲಿಸರು ನನಗೆ ಓದಿ ಹೇಳಿದ್ದಾರೆ ಎಂದರೆ ಸರಿಯಲ್ಲ. ಎಲ್ಲಾ ಗೊತ್ತಿದ್ದರು ಆರೋಪಿಯ ಮಾತು ಕೇಳಿ ಸುಳ್ಳು ಸಾಕ್ಷಿ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

<u>**ಪಾಟೀ ಸವಾಲುಃ ಆರೋಪಿ ಪರವಾಗಿ ಶ್ರೀ SBH ವಕೀಲರಿಂದಃ**</u> ಇಲ್ಲಾ .

**(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಿಸಲಾಯಿತು)**
**ಓ.ಹೇ.ಕೇ. ಸರಿ ಇದೆ.**

**ಪ್ರಧಾನ ಪ್ರ.ದ.ನ್ಯಾ.ದಂ. ಚಿಂಚೋಳಿ**